# ನ್ಯಾಯಮೂರ್ತಿ ಡಾ:ಹೆಚ್.ಎನ್.ನಾಗಮೋಹನ್ ದಾಸ್,
## ಏಕ ಸದಸ್ಯ ಆಯೋಗ,
ಯವನಿಕ ಕಟ್ಟಡ, ನೃಪತುಂಗ ರಸ್ತೆ, ಬೆಂಗಳೂರು-560001

Mobile No: 9480843012 E-mail- justicengmdasinquirycommission@gmail.com


ಸಂ:ನ್ಯಾಹೆಚ್ಎನ್ಏಸಆ/ಸಕಇ/2025 ದಿನಾಂಕ: 23-05-2025

1. ಮುಖ್ಯ ಆಯುಕ್ತರು, ಬಿ.ಬಿ.ಎಂ.ಪಿ, ಬೆಂಗಳೂರು.
2. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು,
3. ಎಲ್ಲಾ ವಲಯ ಆಯುಕ್ತರು, ಬಿ.ಬಿ.ಎಂ.ಪಿ., ಬೆಂಗಳೂರು

ಮಾನ್ಯರೆ,

ವಿಷಯ:- ಪರಿಶಿಷ್ಟ ಜಾತಿಯ ಸಮಗ್ರ ಸಮೀಕ್ಷೆ-2025 ರ ಸಮೀಕ್ಷಾ ಕಾರ್ಯಾವಧಿಯನ್ನು ವಿಸ್ತರಿಸುವ ಕುರಿತು.

ಉಲ್ಲೇಖ:- ಸರ್ಕಾರದ ಆದೇಶ ಸಂ: SWD/8/SLP/2024(P-1), ಬೆಂಗಳೂರು, ದಿನಾಂಕ: 03-12-2024

********

ವಿಷಯಕ್ಕೆ ಸಂಬಂಧಿಸಿದಂತೆ, ಪರಿಶಿಷ್ಟ ಜಾತಿಯಲ್ಲಿನ 101 ಜಾತಿಗಳ ವೈಜ್ಞಾನಿಕ ವರ್ಗೀಕರಣ ಮಾಡಲು ದತ್ತಾಂಶವನ್ನು(Emperical Data) ಸಂಗ್ರಹಿಸುವ ಕುರಿತು ದಿನಾಂಕ: 05-05-2025 ರಿಂದ ಸಮೀಕ್ಷಾ ಕಾರ್ಯವನ್ನು ರಾಜ್ಯಾದ್ಯಂತ ಈಗಾಗಲೇ ಪ್ರಾರಂಭಿಸಲಾಗಿದೆ.

ಬಿಬಿಎಂಪಿ ವ್ಯಾಪ್ತಿಯ ವಲಯಗಳಲ್ಲಿ ಪರಿಶಿಷ್ಟ ಜಾತಿ ಜನಾಂಗದ ಸಮೀಕ್ಷೆ ಕಾರ್ಯವು ಇನ್ನೂ ಪ್ರಗತಿಯಾಗಬೇಕಾಗಿರುವುದರಿಂದ, ಮಳೆ/ಹವಾಮಾನ ವೈಪರೀತ್ಯ ಕಾರಣಗಳಿಂದಾಗಿ, ಅನೇಕ ಪರಿಶಿಷ್ಟ ಜಾತಿ ಸಂಘಗಳಿಂದ ಮತ್ತು ಬೆಂಗಳೂರು ಮಹಾನಗರ ಪಾಲಿಕೆ ವತಿಯಿಂದ ಕೋರಿಕೆಯ ಮೇರೆಗೆ ಸಮೀಕ್ಷಾ ಕಾರ್ಯವನ್ನು ಪೂರ್ಣಗೊಳಿಸಲು ಅನುವಾಗುವಂತೆ ಈ ಕೆಳಕಂಡಂತೆ ದಿನಾಂಕವನ್ನು ವಿಸ್ತರಿಸಲು ನಿರ್ಣಯಿಸಲಾಗಿದೆ.

1) ಮನೆ-ಮನೆ ಭೇಟಿ ನೀಡಿ ಸಮೀಕ್ಷೆ– ದಿನಾಂಕ: 26-05-2025 ರಿಂದ 29-05-2025 ರವರೆಗೆ ವಿಸ್ತರಿಸಲಾಗಿದೆ.

2) ವಿಶೇಷ ಶಿಬಿರ (ಸಮೀಕ್ಷಾ ಬ್ಲಾಕ್ ವ್ಯಾಪ್ತಿಯಲ್ಲಿ) – ದಿನಾಂಕ: 30-05-2025 ರಿಂದ ದಿನಾಂಕ: 01-06-2025 ರವರೆಗೆ (03 ದಿನಗಳು) ಮರು ನಿಗದಿಪಡಿಸಲಾಗಿದೆ.

3) ಆನ್ ಲೈನ್ ಮೂಲಕ ಸ್ವಯಂ ಘೋಷಣೆ- ದಿನಾಂಕ:01-06-2025 ರವರೆಗೆ ಮುಂದುವರೆಯಲಿದೆ.

ಗಣತಿದಾರರು ರಜಾ ದಿನಗಳಲ್ಲಿಯೂ ಸಹ ಸಮೀಕ್ಷೆ ಕೈಗೊಂಡು ಯಶಸ್ವಿಯಾಗಿ ಪೂರ್ಣಗೊಳಿಸಲು ನಿರ್ದೇಶನ ನೀಡುವಂತೆ ತಿಳಿಸಲು ಮಾನ್ಯ ಅಧ್ಯಕ್ಷರಿಂದ ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ವಿಶ್ವಾಸಿ,

Sathyashree R
23/5/2025
ಕಾರ್ಯದರ್ಶಿ
ಏಕ ಸದಸ್ಯ ಆಯೋಗ
ಬೆಂಗಳೂರು.

**ಪ್ರತಿಯನ್ನು:-**

1) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
2) ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು,
3) ನಿರ್ದೇಶಕರು, EDCS, ಬೆಂಗಳೂರು.
4) ಎಲ್ಲಾ ಜಿಲ್ಲೆಗಳ ಜಂಟಿ ನಿರ್ದೇಶಕರು/ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
5) ಕಛೇರಿ ಪ್ರತಿ.